# All India Radio: Bangalore
# National Bulletin In Kannada
# 06.04.2025 13.10 p.m.

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಶ್ರೀಲಂಕಾದ ಅನುರಾಧಾಪುರದಲ್ಲಿಂದು ಭಾರತ ಅನುದಾನಿತ ರೈಲ್ವೆ ಯೋಜನೆಗಳಿಗೆ ಪ್ರಧಾನಿ ನರೇಂದ್ರ ಮೋದಿ ಚಾಲನೆ

೨. ಪ್ರಧಾನಿ ಭೇಟಿಯ ಸಂಕೇತವಾಗಿ ಶ್ರೀಲಂಕಾ ಸರ್ಕಾರ ೧೧ ಭಾರತೀಯ ಮೀನುಗಾರರ ಬಿಡುಗಡೆ

೩. ದೇಶಾದ್ಯಂತ ಇಂದು ರಾಮನವಮಿ ಆಚರಣೆ; ಅಯೋಧ್ಯೆಯಲ್ಲಿ ವಿಶೇಷ ಪೂಜಾ ಕೈಂಕರ್ಯ

೪. ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆರ್ಥಿಕ ನೀತಿ ವಿರುದ್ಧ ಅಮೆರಿಕದಾದ್ಯಂತ ಪ್ರತಿಭಟನೆ

೫. ಐಪಿಎಲ್ ಟಿ-೨೦ ಕ್ರಿಕೆಟ್; ಸನ್‌ರೈಸರ್ಸ್ ಹೈದರಾಬಾದ್ - ಗುಜರಾತ್ ಟೈಟಾನ್ಸ್ ಮುಖಾಮುಖಿ

*******************

ಪ್ರಧಾನಿ ನರೇಂದ್ರ ಮೋದಿ ಶ್ರೀಲಂಕಾದ ಅನುರಾಧಾಪುರದಲ್ಲಿ ಇಂದು ಶ್ರೀಲಂಕಾ ಅಧ್ಯಕ್ಷ ಅನುರ ಕುಮಾರ ದಿಸಾನಾಯಕ ಅವರೊಂದಿಗೆ ಭಾರತ ಅನುದಾನಿತ ರೈಲ್ವೆ ಯೋಜನೆಗಳನ್ನು ಉದ್ಘಾಟಿಸಿದರು.

ಭಾರತದ ಅನುದಾನದೊಂದಿಗೆ ಅಭಿವೃದ್ಧಿಪಡಿಸಲಾಗಿರುವ 'ಮಹೋ ಒಮನ್‌ಥೈ' ರೈಲ್ವೆ ಮಾರ್ಗವನ್ನು ಪ್ರಧಾನಿ ನರೇಂದ್ರ ಮೋದಿ ಹಾಗೂ ಶ್ರೀಲಂಕಾ ಅಧ್ಯಕ್ಷ ಅನುರಕುಮಾರ ದಿಸ್ಸಾನಾಯಕೆ ಜಂಟಿಯಾಗಿ ಉದ್ಘಾಟಿಸಿದರು.

ಇದರ ಜೊತೆಗೆ ಮಾಹೊ-ಅನುರಾಧಾಪುರ ವಿಭಾಗದಾದ್ಯಂತ ಆಧುನಿಕ ರೈಲ್ವೆ ಸಿಗ್ನಲಿಂಗ್ ಮತ್ತು ದೂರಸಂಪರ್ಕ ವ್ಯವಸ್ಥೆಯನ್ನು ಅಳವಡಿಸುವ ಗುರಿ ಹೊಂದಿರುವ ಸಿಗ್ನಲಿಂಗ್ ಯೋಜನೆಯನ್ನು ಉಭಯ ನಾಯಕರು ಚಾಲನೆ ನೀಡಿದರು. ಶ್ರೀಲಂಕಾದ ಉತ್ತರ ಭಾಗದಿಂದ ರಾಜಧಾನಿ ಕೊಲಂಬೊಗೆ ಸುರಕ್ಷಿತ, ತ್ವರಿತ ಮತ್ತು ಆರಾಮದಾಯಕ ಪ್ರಯಾಣವನ್ನು ಒದಗಿಸುವ ಶ್ರೀಲಂಕಾದೊಳಗಿನ ಸಂಪರ್ಕಕ್ಕೆ ಈ ಯೋಜನೆಗಳು ನಿರ್ಣಾಯಕವಾಗಿವೆ.

ಸಾಮಾಜಿಕ ಮಾಧ್ಯಮದಲ್ಲಿ ಪ್ರಧಾನಿ ಅಭಿವೃದ್ಧಿಯ ಪಥದಲ್ಲಿ ಶ್ರೀಲಂಕಾಕ್ಕೆ ಅಗತ್ಯ ಬೆಂಬಲ ನೀಡಲು ಭಾರತಕ್ಕೆ ಹೆಮ್ಮೆಯಿದೆ ಎಂದು ಹೇಳಿದ್ದಾರೆ.

ಶ್ರೀಲಂಕಾ ಪ್ರವಾಸದ ತಮ್ಮ ಅಂತಿಮ ಚರಣದ ಭಾಗವಾಗಿ ಪ್ರಧಾನಿ ನರೇಂದ್ರ ಮೋದಿ ಇಂದು ಅನುರಾಧಾಪುರದ ಜಯಶ್ರೀ ಮಹಾಬೋಧಿ ದೇಗುಲಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರ ಶ್ರೀಲಂಕಾ ಪ್ರವಾಸ ಹಿನ್ನೆಲೆ ವಿಶೇಷ ಸಂಕೇತವಾಗಿ ೧೧ ಭಾರತೀಯ ಮೀನುಗಾರರನ್ನು ಶ್ರೀಲಂಕಾ ಬಿಡುಗಡೆಗೊಳಿಸಿದೆ.

ಶ್ರೀಲಂಕಾ ಅಧ್ಯಕ್ಷ ಅನುರಕುಮಾರ ದಿಸ್ಸಾನಾಯಕೆ ಅವರೊಂದಿಗಿನ ಸಭೆಗಳಲ್ಲಿ ಮೀನುಗಾರರಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚಿಸಲಾಗಿದೆ. ಈ ವಿಷಯಕ್ಕೆ ಸಂಬಂಧಿಸಿದಂತೆ ಮಾನವೀಯ ದೃಷ್ಟಿಕೋನದೊಂದಿಗೆ ಕ್ರಮ ವಹಿಸುವ ಅಗತ್ಯವಿದೆ. ಮೀನುಗಾರರನ್ನು ಶೀಘ್ರದಲ್ಲೇ ಬಿಡುಗಡೆಗೊಳಿಸಿ ಅವರ ದೋಣಿಗಳನ್ನು ಹಿಂದಿರುಗಿಸುವಂತೆ ಕೋರಲಾಗಿದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದರು.

*******************

ರಾಮನವಮಿಯ ಶುಭ ಸಂದರ್ಭದಲ್ಲಿಂದು ತಮಿಳುನಾಡಿನ ರಾಮೇಶ್ವರಂಗೆ ಸಂಪರ್ಕ ಒದಗಿಸುವ ಆಧುನೀಕರಿಸಿದ ನೂತನ ಪಂಬನ್ ರೈಲು ಸೇತುವೆಯನ್ನು ಪ್ರಧಾನಿ ನರೇಂದ್ರ ಮೋದಿ ಅವರು ಇಂದು ಉದ್ಘಾಟಿಸಲಿದ್ದಾರೆ.

ಎರಡು ಕಿಲೋಮೀಟರ್ ಉದ್ದದ ದೇಶದ ಮೊದಲ ಊರ್ಧ್ವ ಲಿಫ್ಟ್ ಸೇತುವೆ ಇದಾಗಿದ್ದು, ೫೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗಿದೆ.

ಇದೇ ವೇಳೆ ಪ್ರಧಾನಿ, ೮ ಸಾವಿರದ ೩೦೦ ಕೋಟಿ ರೂಪಾಯಿ ವೆಚ್ಚದ ರೈಲು ಹಾಗೂ ರಸ್ತೆ ಯೋಜನೆಗಳ ಉದ್ಘಾಟನೆ ಹಾಗೂ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಈ ಕುರಿತು ಒಂದು ವರದಿ....

ಧ್ವನಿ; ವರದಿಗಾರ ಜಾಯ್

******************

ಚೈತ್ರ ಮಾಸದ ೯ನೇ ದಿನವಾದ ಇಂದು ದೇಶಾದ್ಯಂತ ಶ್ರೀ ರಾಮನವಮಿ ಆಚರಿಸಲಾಗುತ್ತಿದೆ. ಈ ಹಬ್ಬ ಭಗವಾನ್ ಶ್ರೀರಾಮ ದೇವರ ಜನ್ಮದಿನದ ಆಚರಣೆಯಾಗಿದೆ.

ರಾಮನವಮಿ ಅಂಗವಾಗಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು, ದೇಶದ ಸಮಸ್ತ ಜನತೆಗೆ ಶುಭಾಶಯ ಕೋರಿದ್ದಾರೆ.

ಭಗವಾನ್ ರಾಮ ದೇವರ ಜೀವನದ ಪಯಣ ಸತ್ಯ, ಧರ್ಮ ಹಾಗೂ ನೈತಿಕ ಮೌಲ್ಯಕ್ಕೆ ಪ್ರತೀಕವಾಗಿದೆ. ಮಾನವ ಜನಾಂಗಕ್ಕೆ ಬದ್ಧತೆ ಹಾಗೂ ನಿಸ್ವಾರ್ಥದಿಂದ ಸೇವೆ ಸಲ್ಲಿಸುವ ಸಂದೇಶವನ್ನು ರಾಮನವಮಿ ಉತ್ಸವ ನೀಡುತ್ತದೆ ಎಂದು ರಾಷ್ಟ್ರಪತಿಯವರು ತಿಳಿಸಿದ್ದಾರೆ.

ರಾಮನವಮಿ ಅಂಗವಾಗಿ ಪ್ರಧಾನಿ ನರೇಂದ್ರ ಮೋದಿ ದೇಶದ ಸಮಸ್ತ ಜನತೆಗೆ ಶುಭಾಶಯಕೋರಿದ್ದಾರೆ. ಪ್ರಭು ಶ್ರೀ ರಾಮನ ಅನುಗ್ರಹ ನಮ್ಮೆಲ್ಲರ ಮೇಲೆ ಸದಾ ಇರಲಿದ್ದು, ಜೀವನದ ಪಯಣಕ್ಕೆ ದಾರಿ ದೀಪವಾಗಲಿದೆ ಎಂದು ಸಾಮಾಜಿಕ ಮಾಧ್ಯಮದಲ್ಲಿ ತಿಳಿಸಿದ್ದಾರೆ.

******************

ರಾಮನಗರಿ ಅಯೋಧ್ಯೆಯು ಭಗವಾನ್ ರಾಮನ ಜನ್ಮೋತ್ಸವವನ್ನು ಆಚರಿಸಲು ಸಜ್ಜಾಗಿದೆ. ಅಯೋಧ್ಯೆಯಲ್ಲಿ, ಭಗವಾನ್ ಶ್ರೀ ರಾಮನ ಜನ್ಮೋತ್ಸವವನ್ನು ಆಚರಿಸಲು ದೇಶದ ಮೂಲೆ ಮೂಲೆಗಳಿಂದ ಭಕ್ತರು ಆಗಮಿಸುತ್ತಿದ್ದು, ಅವರಿಗೆ ಸಕಲ ಅಗತ್ಯ ವ್ಯವಸ್ಥೆಗಳನ್ನು ಕಲ್ಪಿಸಲಾಗಿದೆ.

ಶ್ರೀ ರಾಮ ಜನ್ಮಭೂಮಿ ದೇವಾಲಯವನ್ನು ವಿಶೇಷ ಹೂವುಗಳಿಂದ ಅಲಂಕರಿಸಲಾಗಿದ್ದು, ಇಂದು ರಾಮಲಲ್ಲಾಗೆ ೫೬ ವಿಶಿಷ್ಟ ಬಗೆಯ ನೈವೇದ್ಯಗಳನ್ನು ಅರ್ಪಿಸಲಾಯಿತು.

ಇಂದು ರಾಮಲಲ್ಲಾ ಹಣೆಯ ಮೇಲೆ ವಿಶೇಷ ಸೂರ್ಯ ತಿಲಕವನ್ನು ಸುಮಾರು ೪ ನಿಮಿಷಗಳ ಕಾಲ ಇಡಲಾಯಿತು.

ಈ ಬಾರಿ, ಸರಯು ನದಿಯ ನೀರನ್ನು ಡ್ರೋನ್ ಮೂಲಕ ಭಕ್ತರ ಮೇಲೆ ಸಿಂಪಡಿಸಲಾಗುತ್ತಿದ್ದು, ಸಂಜೆ ದೀಪೋತ್ಸವವನ್ನು ಆಯೋಜಿಸಲಾಗಿದೆ.

******************

ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಇತ್ತೀಚಿನ ಆರ್ಥಿಕತೆ ನೀತಿಗಳು ಮತ್ತು ಇತರ ಯೋಜನೆಗಳ ವಿರುದ್ಧ ಅಮೆರಿಕದಲ್ಲಿ ಲಕ್ಷಾಂತರ ಜನರು ಪ್ರತಿಭಟನೆ ನಡೆಸುತ್ತಿದ್ದಾರೆ.

ಅಮೆರಿಕದ ಎಲ್ಲಾ ೫೦ ರಾಜ್ಯಗಳಲ್ಲಿ ಪ್ರತಿಭಟನೆಗಳು ನಡೆಯುತ್ತಿದ್ದು, ರಾಜ್ಯ ರಾಜಧಾನಿಗಳು, ಸರ್ಕಾರಿ ಕಟ್ಟಡಗಳು ಹಾಗೂ ಕಚೇರಿಗಳು ಸಾಮಾಜಿಕ ಭದ್ರತೆಯ ಪ್ರಧಾನ ಕಚೇರಿ, ಉದ್ಯಾನವನ ಸೇರಿದಂತೆ ಹಲವೆಡೆ ಒಂದು ಸಾವಿರದ ೪೦೦ ಕ್ಕೂ ಅಧಿಕ ಪ್ರತಿಭಟನೆಗಳನ್ನು ಕೈಗೊಳ್ಳಲಾಗಿದೆ.

ವಾಷಿಂಗ್ಟಂನ್ ಡಿಸಿಯ ನ್ಯಾಷನಲ್ ಮಾಲ್ ಬಳಿ ನಡೆದ ಅತಿದೊಡ್ಡ ಪ್ರತಿಭಟನೆಯಲ್ಲಿ ಲಕ್ಷಾಂತರ ಜನರು ಪಾಲ್ಗೊಂಡು, ತಮ್ಮ ಅಸಮಾಧಾನ ವ್ಯಕ್ತಪಡಿಸಿದರು.

ಅಮೆರಿಕ ಮಾತ್ರವಲ್ಲದೆ, ಐರೋಪ್ಯ ನಗರಗಳಲ್ಲೂ ಜನರು ಪ್ರತಿಭಟನೆ ನಡೆಸುತ್ತಿದ್ದು, ಬರ್ಲಿನ್‌ನಲ್ಲಿ ಟೆಸ್ಲಾ ಶೋರೂಮ್ ಮುಂಭಾಗದಲ್ಲಿ ಜರ್ಮನಿಯಲ್ಲಿ ನೆಲೆಸಿರುವ ಅಮೆರಿಕನ್ನರು ಫಲಕಗಳನ್ನು ಪ್ರದರ್ಶಿಸಿ ಪ್ರತಿಭಟನೆ ನಡೆಸಿದರು.

ಡೊನಾಲ್ಡ್ ಟ್ರಂಪ್ ಆಡಳಿತದಲ್ಲಿ ಭ್ರಷ್ಟಾಚಾರ, ಶತಕೋಟ್ಯಾಧಿಪತಿಗಳ ಹಿಡಿತ ಹಾಗೂ ವೈದ್ಯಕೀಯ ಸಾಮಾಜಿಕ ಭದ್ರತೆ ಮತ್ತು ಇತರ ವಲಯಗಳಿಗೆ ಸರ್ಕಾರಿ ಅನುದಾನವನ್ನು ಕಡಿತಗೊಳಿಸಿರುವುದರ ವಿರುದ್ಧ ಪ್ರತಿಭಟನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಂಘಟಕರು ತಿಳಿಸಿದ್ದಾರೆ.

*******************

ಕೇಂದ್ರ ಗೃಹ ಸಚಿವ ಅಮಿತ್ ಶಾ ಇಂದು ರಾಜಸ್ಥಾನಕ್ಕೆ ಭೇಟಿ ನೀಡಲಿದ್ದಾರೆ.

ಈ ಭೇಟಿಯ ಸಂದರ್ಭದಲ್ಲಿ ಅವರು, ಕೋಟ್‌ಪುಟ್ಲಿ-ಬಹಾದೋರ್ ಜಿಲ್ಲೆಯಲ್ಲಿರುವ ಪಾವ್ಟಾದಲ್ಲಿ ಹಲವಾರು ಧಾರ್ಮಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಬಾಢಿಯ ಯೋಗಿ ಬಾಬಾ ಬಾಲನಾಥರ ತಪೋಸ್ಥಲಿಯಲ್ಲಿ ಆಯೋಜಿಸಲಾದ ೧೦೮ ಕುಂಡಿಯ ರುದ್ರ ಮಹಾಮೃತ್ಯುಂಜಯ ಮಹಾಯಜ್ಞದ ಸಮಾರೋಪ ಸಮಾರಂಭದಲ್ಲಿ ಅವರು ಭಾಗವಹಿಸಲಿದ್ದಾರೆ. ಬಳಿಕ ಸನಾತನ ಧರ್ಮ ಸಮ್ಮೇಳನವನ್ನು ಉದ್ದೇಶಿಸಿ ಅವರು ಮಾತನಾಡಲಿದ್ದಾರೆ.

ಸಂಪ್ರದಾಯ ಮತ್ತು ಆಧ್ಯಾತ್ಮಿಕತೆಯನ್ನು ಆಚರಿಸುವ ಈ ಭವ್ಯ ಧಾರ್ಮಿಕ ಕಾರ್ಯಕ್ರಮದಲ್ಲಿ ರಾಜಸ್ಥಾನ ಸೇರಿದಂತೆ ವಿವಿಧ ರಾಜ್ಯಗಳಿಂದ ಅಪಾರ ಸಂಖ್ಯೆಯ ಭಕ್ತರು ಭಾಗವಹಿಸುವ ನಿರೀಕ್ಷೆಯಿದೆ.

ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ, ಕೇಂದ್ರ ಸಚಿವ ಭೂಪೇಂದ್ರ ಯಾದವ್ ಮತ್ತಿತರರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

*******************

ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು, ಇಂದು ಜಮ್ಮು ಮತ್ತು ಕಾಶ್ಮೀರಕ್ಕೆ ಭೇಟಿ ನೀಡಿ, ಈ ಪ್ರದೇಶದ ಭದ್ರತಾ ಪರಿಸ್ಥಿತಿಯನ್ನು ಪರಿಶೀಲಿಸಲಿದ್ದಾರೆ ಮತ್ತು ಭದ್ರತಾ ಸಿಬ್ಬಂದಿಯೊಂದಿಗೆ ಸಂವಾದ ನಡೆಸಲಿದ್ದಾರೆ.

೩ ದಿನಗಳ ಭೇಟಿಯ ಸಮಯದಲ್ಲಿ ಸಚಿವರು, ಜಮ್ಮುವಿನಲ್ಲಿ ಬಿಜೆಪಿ ಶಾಸಕರನ್ನು ಭೇಟಿ ಮಾಡಲಿದ್ದಾರೆ, ಜೊತೆಗೆ ಏಕೀಕೃತ ಪ್ರಧಾನ ಕಚೇರಿಯ ಎರಡು ನಿರ್ಣಾಯಕ ಪ್ರತ್ಯೇಕ ಭದ್ರತಾ ಪರಿಶೀಲನಾ ಸಭೆಗಳು ಹಾಗೂ ಅಮರನಾಥ ಯಾತ್ರೆಯ ವಾರ್ಷಿಕ ತೀರ್ಥಯಾತ್ರೆ ಸಭೆಯ ಅಧ್ಯಕ್ಷತೆ ವಹಿಸಲಿದ್ದಾರೆ.

*******************

ದ್ವಾರಕಾಧೀಶ ಕೃಷ್ಣ ಹಾಗೂ ರುಕ್ಮಿಣಿಯರ ದೈವಿಕ ವಿವಾಹವನ್ನು ಆಚರಿಸಲು ಪ್ರತಿವರ್ಷ ಗುಜರಾತ್ ಪೋರ್‌ಬಂದರ್ ಜಿಲ್ಲೆಯ ಮಾಧವ್‌ಪುರದಲ್ಲಿ ಆಯೋಜಿಸಲಾಗುವ ಐದು ದಿನಗಳ ಮಾಧವ್‌ಪುರ ಘೇಡ್ ಮೇಳ ಇಂದಿನಿಂದ ಆರಂಭಗೊಳ್ಳಲಿದೆ. ಪ್ರತಿ ವರ್ಷ ಆಚರಿಸಲಾಗುವ ಈ ಉತ್ಸವನ್ನು ಈ ಬಾರಿ ಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಉದ್ಘಾಟಿಸಲಿದ್ದು, ಕೇಂದ್ರ ಸಚಿವ ಮನ್ಸೂಖ್ ಮಾಂಡವೀಯ ಈ ವೇಳೆ ಉಪಸ್ಥಿತರಿರಲಿದ್ದಾರೆ.

*******************

ಹೈದರಾಬಾದ್‌ನ ರಾಜೀವ್ ಗಾಂಧಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ ಗುಜರಾತ್ ಟೈಟಾನ್ಸ್ ತಂಡವನ್ನು ಎದುರಿಸಲಿದೆ. ಪಂದ್ಯ ರಾತ್ರಿ ೭:೩೦ ಕ್ಕೆ ಪ್ರಾರಂಭವಾಗಲಿದೆ.

ಚಂಡೀಗಢದ ಮಹಾರಾಜ ಯಾದವೀಂದ್ರ ಸಿಂಗ್ ಅಂತರರಾಷ್ಟ್ರೀಯ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಪಂದ್ಯದಲ್ಲಿ ರಾಜಸ್ಥಾನ ರಾಯಲ್ಸ್ ತಂಡ ಪಂಜಾಬ್ ಕಿಂಗ್ಸ್ ತಂಡವನ್ನು ೫೦ ರನ್‌ಗಳಿಂದ ಪರಾಭವಗೊಳಿಸಿದೆ.

ಇದಕ್ಕೂ ಮುನ್ನ ಚೆನ್ನೈನ ಎಂ.ಎ.ಚಿದಂಬರಂ ಕ್ರೀಡಾಂಗಣದಲ್ಲಿ ನಡೆದ ದಿನದ ಮೊದಲ ಪಂದ್ಯದಲ್ಲಿ ಚೆನ್ನೈ ಸೂಪರ್ ಕಿಂಗ್ಸ್ ತಂಡವನ್ನು ಡೆಲ್ಲಿ ಕ್ಯಾಪಿಟಲ್ಸ್ ತಂಡ ೨೫ ರನ್‌ಗಳಿಂದ ಮಣಿಸಿತು.

**********ಮುಕ್ತಾಯ*********